RNU AIR DHARWAD

# DECEMBER 24, 2025
# AKASHAVANI - DHARWAD
# PRADESH SAMACHARA (KANNADA) 07.05 A.M.

<><><>

ಮುಖ್ಯಾಂಶಗಳು

- ಯುವಪೀಳಿಗೆಯಲ್ಲಿ ಸಮಾನತೆ, ಸಾಮರಸ್ಯ, ಮಾನವೀಯ ಮೌಲ್ಯಗಳ ಅರಿವು ಮೂಡಿಸುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ.
- ಮುಂಬರುವ ದಿನಗಳಲ್ಲಿ ಕೃಷಿ ಸೇರಿದಂತೆ, ಅಸಂಘಟಿತ ಕಾರ್ಮಿಕ ವರ್ಗದವರಿಗೂ ಇ.ಎಸ್.ಐ.ಸಿ ಆಸ್ಪತ್ರೆ ಉಚಿತ ಸೇವೆ ಕುರಿತು ಸರ್ಕಾರದ ಚಿಂತನೆ.
- 2025 ನೇ ಸಾಲಿನ ಕರ್ನಾಟಕ ಜಾನಪದ ಅಕಾಡೆಮಿ ಪ್ರಶಸ್ತಿ ಪ್ರಕಟ
- ಇಂದು ರಾಷ್ಟ್ರೀಯ ಗ್ರಾಹಕರ ದಿನ.

ಈಗ ವಾರ್ತೆಗಳ ವಿವರ

"ಪ್ರಸ್ತುತ ದಿನಗಳಲ್ಲಿ ಸಮಾಜದಲ್ಲಿ ನೈತಿಕತೆಯನ್ನು ಬೆಳೆಸುವ ಮತ್ತು ಆಧುನಿಕ ಜ್ಞಾನವನ್ನು ಮಾನವೀಯ ಮೌಲ್ಯಗಳೊಂದಿಗೆ ಸಂಯೋಜಿಸುವ ಮೂಲಕ, ಧರ್ಮ ಮತ್ತು ಸಂಸ್ಕೃತಿಯನ್ನು ಸಂರಕ್ಷಿಸುವ, ರಾಷ್ಟ್ರದ ಏಕತೆ ಮತ್ತು ಸಮಗ್ರತೆಯನ್ನು ಹಾಗೂ ಸಮಾಜದಲ್ಲಿ ಸಮಾನತೆ ಮತ್ತು ಸಾಮರಸ್ಯವನ್ನು ಕಾಪಾಡಿಕೊಳ್ಳುವ ಶಿಕ್ಷಣದ ಅವಶ್ಯಕತೆಯಿದೆ" ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ಉಡುಪಿ ಜಿಲ್ಲೆಯ ಕುಂದಾಪುರ ಶಿಕ್ಷಣ ಸಂಘದ ಸುವರ್ಣ ಮಹೋತ್ಸವ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು "ಯುವಕರ ಕೌಶಲ್ಯ, ಪ್ರತಿಭೆ ಮತ್ತು ಶಕ್ತಿಯನ್ನು ಸಂಘಟಿಸಲು ಪ್ರಯತ್ನಿಸಬೇಕು. ಅಭಿವೃದ್ಧಿ ಹೊಂದುವುದರ ಜೊತೆಗೆ ಸಮಾನತೆ, ಸಾಮರಸ್ಯ ಮತ್ತು ಮಾನವೀಯ ಮೌಲ್ಯಗಳ ಬಗ್ಗೆ ಯುವಪೀಳಿಗೆಯಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು. ಇದರಲ್ಲಿ ಶಿಕ್ಷಕರು ಮತ್ತು ಶಿಕ್ಷಣ ಸಂಸ್ಥೆಗಳ ಪಾತ್ರ ನಿರ್ಣಾಯಕವಾಗಿರುತ್ತದೆ ಎಂದರು.

<><><>

ಪ್ರಸ್ತುತ ದೇಶದಲ್ಲಿ ಇರುವ ಇ.ಎಸ್.ಐ.ಸಿ ಆಸ್ಪತ್ರೆಯಲ್ಲಿ ಸಂಘಟಿತ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗೆ ಉಚಿತ ಸೇವೆ ನೀಡುತ್ತಿದ್ದು, ಮುಂಬರುವ ದಿನಗಳಲ್ಲಿ ಕೃಷಿ, ಗಿಗ್, ಗಾರ್ಮೆಂಟ್ಸ ಸೇರಿದಂತೆ ಅಸಂಘಟಿತ ಕಾರ್ಮಿಕ ವರ್ಗದವರಿಗೂ ಈ ಆಸ್ಪತ್ರೆ ಸೇವೆ ಉಚಿತವಾಗಿ ಲಭ್ಯವಾಗಲಿದೆ ಎಂದು ಕೇಂದ್ರದ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಕಲಬುರಗಿಯಲ್ಲಿ ಆಯೋಜಿಸಲಾದ ಕ್ರೀಡಾ ಸಂಕೀರ್ಣ, ಮೇಲ್ಛಾವಣಿಯ ಸೌರ ವಿದ್ಯುತ್ ವ್ಯವಸ್ಥೆ ಮತ್ತು ಅಂತರ್ಜಲ ಮರುಪೂರಣ ಸೌಲಭ್ಯ ಉದ್ಘಾಟಿಸಿ ಮಾತನಾಡಿದ ಅವರು, ಕಾರ್ಮಿಕ ಮಕ್ಕಳಿಗೆ ಅನುಕೂಲವಾಗಲೆಂದೇ ದೇಶಾದ್ಯಂತ 10 ವೈದ್ಯಕೀಯ ಕಾಲೇಜು ತೆರೆಯಲಾಗುತ್ತಿದೆ. ಆದರೆ ಕರ್ನಾಟಕದಲ್ಲಿ ಪ್ರಸ್ತುತ ಎರಡು ಇ.ಎಸ್.ಐ.ಸಿ ವೈದ್ಯಕೀಯ ಕಾಲೇಜು ಇರುವ ಹಿನ್ನೆಲೆ, ಹೊಸ ಕಾಲೇಜಿಗೆ ಪ್ರಸ್ತಾವ ಇಲ್ಲ ಎಂದರು.

<><><>

ಕರ್ನಾಟಕ ಜಾನಪದ ಅಕಾಡೆಮಿಯ ಯೋಜನೆಗಳಲ್ಲಿ ಜಾನಪದ ಕಲೆಗಳಿಗೆ ಗಣನೀಯ ಸೇವೆ ಸಲ್ಲಿಸಿದ ಜಾನಪದ ಕಲಾವಿದರಿಗೆ, ಜಾನಪದ ಕ್ಷೇತ್ರ ತಜ್ಞರಿಗೆ ವಾರ್ಷಿಕ ಪ್ರಶಸ್ತಿಗಳನ್ನು ನೀಡಿ ಗೌರವಿಸುತ್ತದೆ. ಕರ್ನಾಟಕ ಜಾನಪದ ಅಕಾಡೆಮಿಯು 2025 ನೇ ಸಾಲಿನಲ್ಲಿ, 30 ಹಿರಿಯ ಜಾನಪದ ಕಲಾವಿದರಿಗೆ ವಾರ್ಷಿಕ ಗೌರವ ಪ್ರಶಸ್ತಿ, ಇಬ್ಬರು ಜಾನಪದ ವಿದ್ವಾಂಸರಿಗೆ ತಜ್ಞ ಪ್ರಶಸ್ತಿ ಹಾಗೂ 2024 ನೇ ಸಾಲಿನ ಇಬ್ಬರಿಗೆ ಪುಸ್ತಕ ಬಹುಮಾನ ನೀಡಿ ಗೌರವಿಸಲಿದೆ ಎಂದು ಪ್ರಕಟಣೆ ತಿಳಿಸಿದೆ. ಕಲಾವಿದರಿಗೆ ನೀಡುವ ವಾರ್ಷಿಕ ಗೌರವ ಪ್ರಶಸ್ತಿಯ ಮೊತ್ತ 25 ಸಾವಿರ, ಇಬ್ಬರು ಕ್ಷೇತ್ರ ತಜ್ಞರಿಗೆ ತಲಾ 50 ಸಾವಿರ ಹಾಗೂ ಪುಸ್ತಕ ಬಹುಮಾನಿತರಿಗೆ ತಲಾ 25 ಸಾವಿರ ರೂಪಾಯಿಗಳ ಪ್ರಶಸ್ತಿ ಮೊತ್ತದ ಜೊತೆಗೆ ಸ್ಮರಣಿಕೆ, ಶಾಲು, ಹಾರ, ಫಲ ತಾಂಬೂಲ ನೀಡಿ ಗೌರವಿಸಲಾಗುವುದು. ಬೆಂಗಳೂರು ಗ್ರಾಮಾಂತರದ ಬಚ್ಚಮ್ಮ – ಸೋಬಾನೆ ಪದ, ಚಿಕ್ಕಬಳ್ಳಾಪುರದ ಕೆ.ಎಂ. ನಾರಾಯಣ ಸ್ವಾಮಿ ಅವರನ್ನು ಕೀಲು ಕುದುರೆ, ತುಮಕೂರಿನ ಗೊಲ್ಲರಹಟ್ಟಿ ಸಾಸಲು ರೇವಣ್ಣ – ಅಲಗು ಕುಣಿತ, ಚಿತ್ರದುರ್ಗದ ಜಿ. ಎನ್. ವಿರೂಪಾಕ್ಷಪ್ಪ – ಜಾನಪದ ಸಂಗೀತ, ಶಿವಮೊಗ್ಗದ ಕೆ.ಎಸ್.ಲಿಂಗಪ್ಪ ಅವರನ್ನು ಅಂಟಿಕೆ ಪಿಂಟಿಕೆ, ಚಾಮರಾಜನಗರದ ಬಸವರಾಜು – ಗೊರುಕನ ನೃತ್ಯ, ಉಡುಪಿಯ ಗುಲಾಬಿ ಗೌಡ್ತಿ – ನಾಟಿ ವೈದ್ಯ, ಕೊಡಗು ವಿರಾಜಪೇಟೆ ತಾಲ್ಲೂಕಿನ ಅಮ್ಮಣಿ – ಸೂಲಗಿತ್ತಿ ಹಾಗೂ ಕುಡಿಯ ಜನಾಂಗದ ಹಾಡುಗಾರಿಕೆ, ಬೆಳಗಾವಿಯ ಭೀಮಪ್ಪ ಸಿದ್ಧಪ್ಪ ಮುತ್ನಾಳ್ ಅವರನ್ನು ಪುರವಂತಿಕೆ, ಧಾರವಾಡದ ಪ್ರಕಾಶ ಮಲ್ಲಿಗವಾಡ ಅವರನ್ನು ಜಾನಪದ ನೃತ್ಯ, ವಿಜಯಪುರದ ಜ್ಯೋತಿಲಿರ್ಂಗ ಹೂನಕಟ್ಟಿ – ಜಾನಪದ ಗಾಯನ ಕ್ಷೇತ್ರದಲ್ಲಿ ಆಯ್ಕೆ ಮಾಡಲಾಗಿದೆ. ಬಾಗಲಕೋಟೆಯ ಚಂದ್ರಲಿಂಪ್ಪ ನಿಂಗಪ್ಪ ಬಸರಕೋಡ –ಪುರುವಂತಿಕೆ, ಉತ್ತರಕನ್ನಡದ ಗೌರಿ ನಾಗಪ್ಪ ನಾಯ್ಕ – ಸುಗ್ಗಿ ಹಾಡುಗಳು, ಹಾವೇರಿಯ ಬಿಕ್ಷಾಪತಿ ಮೋತಿ – ಹಗಲುವೇ ’, ಗದಗನ ಕಾಶಿಮಸಾಬ ಹುಸೇನಸಾಬ ಅವರನ್ನು ಹೆಜ್ಜೆ ಮೇಳದಲ್ಲಿ, ಕಲಬುರಗಿಯ ಭಾಗಪ್ಪ ಶೇಕಪ್ಪ ಸೋಮಜನ – ತತ್ವಪದ, ಬೀದರ್‌ನ ಇಂದ್ರಮ್ಮ – ಮೋಹರಂ ಪದ, ರಾಯಚೂರಿನ ಯಶವಂತಗೌಡ ಅಮರೇಗೌಡ – ತತ್ವಪದ, ಕೊಪ್ಪಳದ ಕಿಂಡ್ರಿ ಲಕ್ಷ್ಮೀಪತಿ – ಸುಡುಗಾಡು ಸಿದ್ದರು, ಹಾಗೂ ಯಾದಗಿರಿಯ ಹಣಮಂತ – ತತ್ವಪದ ಕಲಾ ಪ್ರಕಾರಗಳಲ್ಲಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ತುಮಕೂರಿನ ಡಾಕ್ಟರ್ ಚಿಕ್ಕಣ್ಣ ಯಣ್ಣೆಕಟ್ಟೆ ಹಾಗೂ ಕಲಬುರಗಿಯ ಡಾಕ್ಟರ್ ಎಚ್.ಟಿ.ಪೋತೆ ಅವರನ್ನು ಜಾನಪದ ತಜ್ಞ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಬೆಂಗಳೂರಿನ ಡಾಕ್ಟರ್ ವೀರಾಸಾಬಿಹಳ್ಳಿ ಶಿವಣ್ಣ ಹಾಗೂ ಡಾಕ್ಟರ್ ಇಮಾಮ್ ಸಾಹೇಬ್ ಹಡಗಲಿ ಅವರನ್ನು 2024ನೇ ಸಾಲಿನ ಪುಸ್ತಕ ಬಹುಮಾನಕ್ಕಾಗಿ ಆಯ್ಕೆ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

**<><><>**

ಇಂದು ರಾಷ್ಟ್ರೀಯ ಗ್ರಾಹಕರ ದಿನ. ಡಿಜಿಟಲ್ ಮಾಧ್ಯಮದ ಮೂಲಕ ದಕ್ಷ ಹಾಗೂ ತ್ವರಿತ ನ್ಯಾಯ ವಿಲೇವಾರಿಗೆ ಆದ್ಯತೆ’ ಎಂಬ ಧ್ಯೇಯ ವಾಕ್ಯದೊಂದಿಗೆ ರಾಷ್ಟ್ರೀಯ ಗ್ರಾಹಕರ ದಿನ ಆಚರಿಸಲಾಗುವುದು. ಗ್ರಾಹಕ ಹಕ್ಕುಗಳ ಮಹತ್ವ ಮತ್ತು ಗ್ರಾಹಕ ರಕ್ಷಣೆಯ ಕುರಿತು ಜಾಗೃತಿ ಮೂಡಿಸಲು ಪ್ರತಿ ವ ’ ಡಿಸೆಂಬರ್ 24 ರಂದು ರಾಷ್ಟ್ರೀಯ ಗ್ರಾಹಕರ ದಿನ ಆಚರಿಸಲಾಗುತ್ತದೆ. ಹಾಸನ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ರಾಷ್ಟ್ರೀಯ ಗ್ರಾಹಕರ ದಿನದ ಅಂಗವಾಗಿ ಇಂದು ಮಧ್ಯಾಹ್ನ ಎ.ವಿ.ಕಾಂತಮ್ಮ ಪದವಿ ಪೂರ್ವ ಕಾಲೇಜಿನಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರದ ಆಯೋಗದ ಅಧ್ಯಕ್ಷ ಸಿ.ಎಂ ಚಂಚಲ ಅಧ್ಯಕ್ಷತೆ ವಹಿಸಲಿದ್ದಾರೆ.

**<><><>**

ತಾಂಡಾ, ಹಾಡಿ ಮತ್ತು ನಗರದ ಕೊಳಚೆ ಪ್ರದೇಶಗಳು ಸೇರಿದಂತೆ ಕೊಳಗೇರಿ ಪ್ರದೇಶದಲ್ಲಿ ದಶಕಗಳಿಂದ ವಾಸಿಸುತ್ತಿದ್ದ ದಾಖಲೆಗಳಿಲ್ಲದವರಗೆ ಸರ್ಕಾರದಿಂದ ಮನೆ ಹಕ್ಕು ಪತ್ರ ನೀಡುವ ಮೂಲಕ ಕಾನೂನು ಬದ್ಧ ಮಾಲಿಕತ್ವ ದೊರಕಿಸಿಕೊಡಲಾಗಿದೆ ಎಂದು ಶಾಸಕ ಎಚ್.ಆರ್. ಗವಿಯಪ್ಪ ಹೇಳಿದ್ದಾರೆ. ಹೊಸಪೇಟೆಯಲ್ಲಿರುವ ಜಿಲ್ಲಾ ಒಳ ಕ್ರೀಡಾಂಗಣದಲ್ಲಿ ವಸತಿ ಇಲಾಖೆ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಉಪವಿಭಾಗ ಬಳ್ಳಾರಿ ವತಿಯಿಂದ ಆಯೋಜಿಸಿದ್ದ ಹಕ್ಕು ಪತ್ರ ವಿತರಿಸುವ ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಿ ಅವರು ಮಾತನಾಡಿದರು. ಹಕ್ಕು ಪತ್ರಗಳ ವಿತರಣೆಯ ಮೂಲಕ ವಸತಿ ರಹಿತ ನಿವಾಸಿಗಳಿಗೆ ಅಧಿಕೃತ ಮಾಲೀಕತ್ವ ಕಲ್ಪಿಸಲು ಸರ್ಕಾರದಿಂದ ದಿಟ್ಟ ಕ್ರಮ ಕೈಗೊಳ್ಳಲಾಗಿದೆ. ಅವರ ಆಸ್ತಿಯ ಮೇಲಿನ ಯಾವುದೇ ವಿವಾದಗಳಿಗೆ ಕಾನೂನು ರಕ್ಷಣೆ ಇರುತ್ತದೆ. ಮಾಲೀಕತ್ವದ ಹಕ್ಕುಗಳನ್ನು ಕಾನೂನಿನಿಂದ ರಕ್ಷಿಸಲಾಗುತ್ತದೆ ಎಂದರು.

**<><><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರದಲ್ಲಿ ನಾಳೆ ಮಧ್ಯಾಹ್ನ 12 ಗಂಟೆಯಿಂದ ಬ್ರಹ್ಮರಥೋತ್ಸವ ನಡೆಯಲಿದ್ದು, ಜಿಲ್ಲಾಡಳಿತ ವತಿಯಿಂದ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಬ್ರಹ್ಮರಥೋತ್ಸವದ ಸಿದ್ಧತೆಗಳ ಕುರಿತು ಮಾಹಿತಿ ನೀಡಿದ ಅವರು, ಭಕ್ತರ ಸಂಚಾರಕ್ಕೆ ಯಾವುದೇ ಸಮಸ್ಯೆ ಆಗದಂತೆ ಕ್ರಮವಹಿಸಲಾಗಿದೆ ಎಂದರು. ಜಿಲ್ಲಾ ಪೊಲೀಸ್ ವರಿ ಾಧಿಕಾರಿ ಸಿ.ಕೆ ಬಾಬಾ ಮಾತನಾಡಿ, ಪ್ರತಿ ವ ್ದಂತೆ ಬ್ರಹ್ಮರಥೋತ್ಸವಕ್ಕೆ ಬರುವ ಭಕ್ತರ ವಾಹನಗಳಿಗೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದ್ದು, ಸೂಕ್ತ ಬಂದೋಬಸ್ತ ಕೈಗೊಳ್ಳಲಾಗಿದೆ. ಈ ವ ್ ಸಾವಿರ ಮಂದಿ ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ. ಅಗ್ನಿಶಾಮಕ ವಾಹನ ವ್ಯವಸ್ಥೆ ಮಾಡಲಾಗಿದೆ. ಜತೆಗೆ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ಅದರ ವೀಕ್ಷಣೆಗೆ ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದೆ ಎಂದರು.

<><><>

ದಾವಣಗೆರೆ ಜಿಲ್ಲೆಯ ವಸತಿ ಶಾಲೆಗಳು ಮತ್ತು ಹಾಸ್ಟೆಲ್‌ಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸುರಕ್ಷತೆ ಮತ್ತು ಆರೋಗ್ಯದ ದೃಷ್ಟಿಯಿಂದ "ವಿದ್ಯಾರ್ಥಿ ಆರೋಗ್ಯ ಕಾರ್ಡ್" ವ್ಯವಸ್ಥೆಯನ್ನು ಜನವರಿಯಿಂದ ಅನು ಾನಕ್ಕೆ ತರಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ತಿಳಿಸಿದ್ದಾರೆ. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯದ ವತಿಯಿಂದ, ಗ್ರಾಮೀಣ ಮತ್ತು ನಗರ ವಿಕಲಾಂಗಚೇತನ ಪುನರ್ವಸತಿ ಕಾರ್ಯಕರ್ತರಿಗೆ ಮಕ್ಕಳ ರಕ್ಷಣೆ ಕುರಿತು ಆಯೋಜಿಸಲಾಗಿದ್ದ ಅರಿವು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದಿರುವ ಸಂಬಂಧ ಯಶಸ್ವಿ ಕಾರ್ಯಾಚರಣೆ ನಡೆಸಿದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಜಾಗೃತ ದಳದ ಅಧಿಕಾರಿಗಳು 31 ಪ್ರಕರಣಗಳನ್ನು ದಾಖಲಿಸಿ, 2 ಲಕ್ಷದ 17 ಸಾವಿರ ರೂಪಾಯಿಗಳ ದಂಡ ವಿಧಿಸಿದ್ದಾರೆ. ಸೆಸ್ಕ್ ವ್ಯಾಪ್ತಿಯಲ್ಲೂ ಸಾಮೂಹಿಕ ಕಾರ್ಯಾಚರಣೆ ನಡೆಸಿದ ಸೆಸ್ಕ್ ಜಾಗೃತದಳ ತಂಡದ ಅಧಿಕಾರಿಗಳು ಹಾಗೂ ಸಿಬ್ಬಂದಿ, ಅನಧಿಕೃತವಾಗಿ ವಿದ್ಯುತ್ ಸಂಪರ್ಕವನ್ನು ಪಡೆಯುವ ಮೂಲಕ ನಿಗಮಕ್ಕೆ ನ ್ಟ ಉಂಟುಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಂಡಿದ್ದಾರೆ.

<><><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ, ಯುವ ಸೌರಭ' ಯುವ ಕಲಾವಿದರ ಸಾಂಸ್ಕೃತಿಕ ಕಾರ್ಯಕ್ರಮವನ್ನು ನಾಡಿದ್ದು 26 ರಂದು ಮಧ್ಯಾಹ್ನ ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ. ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋ ' ಎಸ್. ಲಾಡ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಾಸಕ ಅರವಿಂದ ಚಂದ್ರಕಾಂತ ಬೆಲ್ಲದ ಅಧ್ಯಕ್ಷತೆ ವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

<><><>

ಚಿತ್ರಕಲಾ ಶಿಲ್ಪಿ ಡಿ.ವಿ. ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ನಾಡಿದ್ದು 26 ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡದ ಸರ್ಕಾರಿ ಆರ್ಟ್ ಗ್ಯಾಲರಿಯಲ್ಲಿ ರಾಜ್ಯ ಮಟ್ಟದ ಚಿತ್ರಕಲಾ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ-2025 ಕಾರ್ಯಕ್ರಮವನ್ನು ಡಿ.ವಿ. ಹಾಲಭಾವಿ ಪುಣ್ಯಸ್ಮರಣೆ ಪ್ರಯುಕ್ತ ಆಯೋಜಿಸಲಾಗಿದೆ ಎಂದು ಟ್ರಸ್ಟ್‌ನ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>